**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 36/2024**

**ಚಾ.ಸಾಃ 2, ಪ್ರಾ.ಸಾಃ 3**

| | |
|---|---|
| ಸಾಕ್ಷಿದಾರನ ಹೆಸರು | ಈಶ್ವರ ಹೆಗಡೆ |
| ತಂದೆಯ ಹೆಸರು | ಮಂಜುನಾಥ ಹೆಗಡೆ |
| ವಯಸ್ಸು | 34 ವರ್ಷಗಳು |
| ಉದ್ಯೋಗ | ಇಲೆಕ್ಟ್ರಿಕಲ್ ಅಂಗಡಿ |
| ವಾಸ್ತವ್ಯ | ಮುಗ್ವಾ ಸುಬ್ರಹ್ಮಣ್ಯ, ಹೊನ್ನಾವರ ತಾಲೂಕು |

**ಸಾಕ್ಷಿಯನ್ನು ದಿನಾಂಕಃ 21-08-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ದಿನಾಂಕ 26-11-2023ರಂದು ಸಂಜೆ 04-30ರ ಸಮಯದಲ್ಲಿ ಮುಗ್ವಾ ಸುಬ್ರಹ್ಮಣ್ಯ ದೇವಸ್ಥಾನದ ಎದುರಿಗೆ ಇರುವ ರಾಘವೇಂದ್ರ ಭಾರತಿ ಸಂಸ್ಕೃತ ಪಾಠಶಾಲೆಯ ಎದುರಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಒಂದು ಕಾರು ಮತ್ತು ಬೈಕಿಗೆ ಅಪಘಾತವಾಗಿದ್ದು ಅಪಘಾತ ಸ್ಥಳವನ್ನು ಚಾಸಾ-1ರವರು ತೋರಿಸಿದ್ದು ಸದರಿ ಸ್ಥಳದಲ್ಲಿ ಪೋಲೀಸರು ನನ್ನ ಮತ್ತು ಚಾಸಾ-3ರವರ ಸಮಕ್ಷಮ ಒಂದು ಸ್ಥಳ ಪಂಚನಾಮೆ ಮತ್ತು ಕಚ್ಚಾ ನಕಾಶೆಯನ್ನು ತಯಾರಿಸಿ ಫೋಟೋಗಳನ್ನು ತೆಗೆಸಿರುತ್ತಾರೆ. ಸ್ಥಳ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಬಿ) ಎಂದು, ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಫೋಟೋಗಳನ್ನು ನಿಪಿ-4 ರಿಂದ 10 ಎಂದು ಗುರುತಿಸಲಾಗಿದೆ.

ಅದೇ ದಿನ ಸಂಜೆ ವೇಳೆಯಲ್ಲಿ ಪೋಲೀಸರು ನನ್ನನ್ನು ಮತ್ತು ಚಾಸಾ-3ರವರನ್ನು ಠಾಣೆಗೆ ಕರೆಸಿದ್ದು ಅಲ್ಲಿ ಅಪಘಾತಕ್ಕೊಳಗಾಗಿದ್ದ ಕಾರು ಮತ್ತು ಬೈಕನ್ನು ಚಾಸಾ-1ರವರು ತೋರಿಸಿದ್ದು ಅವುಗಳ ಮುಂದೆ ನಮ್ಮನ್ನು ನಿಲ್ಲಿಸಿ 6 ಫೋಟೋಗಳನ್ನು ತೆಗೆಸಿ, ವಾಹನಗಳನ್ನು ಅಮಾನತ್ತುಪಡಿಸಿಕೊಂಡು ಪಂಚನಾಮೆ ತಯಾರಿಸಿ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ಸದರಿ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-11 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-11(ಬಿ) ಎಂದು ಗುರುತಿಸಲಾಯಿತು. 6 ಫೋಟೋಗಳನ್ನು ನಿಪಿ-12 ರಿಂದ 17 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಂ. ಎನ್. ಸುಬ್ರಹ್ಮಣ್ಯರಿಂದಃ**

ಪಂಚನಾಮೆಯನ್ನು ಇದೇ ರೀತಿ ಬರೆಯಬೇಕು ಎಂದು ನಾನು ಹೇಳಿರುತ್ತೇನೆ. ಪಂಚನಾಮೆಯ ಕಾಲಕ್ಕೆ ನನ್ನನ್ನು ಚಾಸಾ-1 ಕರೆಸಿರುತ್ತಾರೆ. ಚಾಸಾ-1ರವರು ನನ್ನನ್ನು ಸಂಜೆ 04-00 ಗಂಟೆಗೆ ಕರೆಸಿರುತ್ತಾರೆ. ಪಂಚನಾಮೆಯ ಕಾಲಕ್ಕೆ ಸ್ಥಳದಲ್ಲಿ ಕಾರು ಮತ್ತು ಬೈಕು ಇರಲಿಲ್ಲ. ನಾನು

ಅಪಘಾತವನ್ನು ನೋಡಿಲ್ಲ. ಪಂಚನಾಮೆಗೆ ನಾನೇ ಮೊದಲು ಸಹಿ ಹಾಕಿರುತ್ತೇನೆ. ಪಂಚನಾಮೆಯ ಕಾಲಕ್ಕೆ ರಸ್ತೆಯ ಉದ್ದ ಅಗಲಗಳನ್ನು ಯಾರು ಹೇಳಿದರು ನನಗೆ ಗೊತ್ತಿಲ್ಲ. ಚಾಸಾ-1 ರವರ ಅಂಗಡಿಯಲ್ಲಿ ಮೃತನ ಮಾವ ಕೆಲಸ ಮಾಡುತ್ತಾರೆ ಎಂದರೆ ಸರಿ. ಮೃತೆ ಸುಬ್ರಹ್ಮಣ್ಯರವರ ಅಕ್ಕನ ಮಗಳು ಎಂದರೆ ಸರಿ. ನಾನು ಸುಬ್ರಹ್ಮಣ್ಯನ ಒತ್ತಾಯಕ್ಕೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯ ಕಾಲಕ್ಕೆ ನಾನು ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**